ಶ್ರೀರಂಗಪಟ್ಟಣ ತಾಲ್ಲೂಕಿನ ಅರಣ್ಯವಲಯಾಧಿಕಾರಿಗಳ ಕಛೇರಿಯನ್ನು ಶೆಟ್ಟಹಳ್ಳಿ ಸಮೀಪದ ಅರಣ್ಯ ಪ್ರದೇಶಕ್ಕೆ ವರ್ಗಾಯಿಸಿರುವುದರ ಬಗ್ಗೆ.

2930(3807)

ಶ್ರೀಮತಿ ಪಾರ್ವತಮ್ಮ ಶ್ರೀಕಂಠಯ್ಯ(ಶ್ರೀರಂಗಪಟ್ಟಣ ಕ್ಷೇತ್ರ): ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶ್ರೀರಂಗಪಟ್ಟಣ ತಾಲ್ಲೂಕಿನ ವಲಯ ಅರಣ್ಯಾಧಿಕಾರಿಗಳ ಕಛೇರಿಯನ್ನು ಶೆಟ್ಟಹಳ್ಳಿ ಸಮೀಪದ ಅರಣ್ಯ ಪ್ರದೇಶಕ್ಕೆ ವರ್ಗಾಯಿಸಲಾಗಿದೆಯೇ?

ಆ) ಇದರಿಂದ ಸಾರ್ವಜನಿಕರಿಗೆ ತಮ್ಮ ದೂರುಗಳನ್ನು ಸಲ್ಲಿಸಲು ವಾಹನ ಸೌಕರ್ಯವಿಲ್ಲದೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ ಈ ವಲಯ ಅರಣ್ಯಾಧಿಕಾರಿಗಳ ಕಛೇರಿಯನ್ನು ಶ್ರೀರಂಗಪಟ್ಟಣಕ್ಕೆ ವರ್ಗಾಯಿಸಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಕೆ.ಎಚ್.ರಂಗನಾಥ್ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು):

ಅ) ಹೌದು.

ಆ) ಬಂದಿದೆ.

ಇ) ಈ ಬಗ್ಗೆ ಪರಿಶೀಲಿಸಲಾಗುವುದು.

ಶ್ರೀರಂಗಪಟ್ಟಣ ತಾಲ್ಲೂಕಿನಲ್ಲಿರುವ ಪಶು ವೈದ್ಯಕೀಯ ಆಸ್ಪತ್ರೆಗಳಲ್ಲಿ ಸಿಬ್ಬಂದಿ ಕೊರತೆ.

2931(3808)

ಶ್ರೀಮತಿ ಪಾರ್ವತಮ್ಮ ಶ್ರೀಕಂಠಯ್ಯ(ಶ್ರೀರಂಗಪಟ್ಟಣ): ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶ್ರೀರಂಗಪಟ್ಟಣ ತಾಲ್ಲೂಕಿನಲ್ಲಿರುವ ಪಶು ಆಸ್ಪತ್ರೆಗಳಲ್ಲಿ ವೈದ್ಯಾಧಿಕಾರಿಗಳ ಕೊರತೆ ಹಾಗೂ ಔಷಧಿಗಳು ಇಲ್ಲದೆ ಅನೇಕ ಹಳ್ಳಿಗಳಲ್ಲಿ ಜಾನುವಾರುಗಳಿಗೆ

ಆಗುತ್ತಿರುವ ತೊಂದರೆಯನ್ನು ತಪ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಆ) ಯಾವ ಯಾವ ಪಶುವೈದ್ಯಕೀಯ ಆಸ್ಪತ್ರೆಗಳಲ್ಲಿ ವೈದ್ಯರು ಸೇರಿದಂತೆ ಇತರ ಸಿಬ್ಬಂದಿ ವರ್ಗದವರು ಖಾಲಿ ಇರುವ ಬಗ್ಗೆ ವಿವರಗಳನ್ನು ಒದಗಿಸಿ?

ಇ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಎ.ಕೃಷ್ಣಪ್ಪ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು):

ಅ) ಪಶುವೈದ್ಯಾಧಿಕಾರಿಗಳನ್ನು ಗುತ್ತಿಗೆ ಆಧಾರದ ಮೇಲೆ ತುಂಬಲಾಗಿದೆ.

ಔಷಧಿಗಳನ್ನು ಸಾರ್ವಜನಿಕ ವಲಯ ಉದ್ದಿಮೆಗಳಿಂದ ಖರೀದಿಸಲು ಆದೇಶವನ್ನು ಹೊರಡಿಸಲಾಗಿದೆ. ಮಾದರಿಯಂತೆ ಜಿಲ್ಲಾವಾರು ವಿತರಣೆ ಮಾಡಲಾಗುವುದು.

ಆ) ಪಶುವೈದ್ಯಕೀಯ ಆಸ್ಪತ್ರೆಗಳಲ್ಲಿ ಖಾಲಿ ಇರುವ ಹುದ್ದೆಗಳ ವಿವರ ಕೆಳಕಂಡಂತೆ ಇದೆ.

1.	ಪಶು ಚಿಕಿತ್ಸಾಲಯ ಬೆಳಗೊಳ	- 1 ಪಶು ಸಹಾಯಕರ ಹುದ್ದೆ
2.	ಪ್ರಾಥಮಿಕ ಪಶು ಚಿಕಿತ್ಸಾಲಯ, ನಗುವನಹಳ್ಳಿ	- 1 ಪಶು ಸಹಾಯಕರ ಹುದ್ದೆ
3.	ಪ್ರಾಥಮಿಕ ಪಶು ಚಿಕಿತ್ಸಾಲಯ, ಟಿ.ಎಂ.ಹೊಸೂರು.	- 1 ಪಶು ಸಹಾಯಕರ ಹುದ್ದೆ
4.	ಪ್ರಾಥಮಿಕ ಪಶು ಚಿಕಿತ್ಸಾಲಯ ಕೆ.ಶೆಟ್ಟಪಳ್ಳಿ	- 1 ಪಶು ಸಹಾಯಕರ ಹುದ್ದೆ
5.	ಪಶು ಚಿಕಿತ್ಸಾಲಯ ಪಾಲಹಳ್ಳಿ	- 2 ಡಿ ದರ್ಜೆಯ ಹುದ್ದೆ
6.	ಪಶು ಚಿಕಿತ್ಸಾಲಯ ಗಾಮನಹಳ್ಳಿ	- 1 ಡಿ ದರ್ಜೆಯ ಹುದ್ದೆ
7.	ಪಶು ಚಿಕಿತ್ಸಾಲಯ ಬಲ್ಲೇನಹಳ್ಳಿ	- 1 ಡಿ ದರ್ಜೆಯ ಹುದ್ದೆ

ಇ) ಖಾಲಿ ಇರುವ ಪಶುವೈದ್ಯಕೀಯ ಸಹಾಯಕರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಹಾಗೂ ಡಿ ದರ್ಜೆಯ ಹುದ್ದೆಗಳನ್ನು ವಿಭಾಗಾಧಿಕಾರಿಗಳ, ಜಿಲ್ಲಾಧಿಕಾರಿಗಳ

ಹೆಚ್ಚುವರಿ ಪಟ್ಟಿಯಿಂದ ರೀಡಿಪ್ಲಾಯ್‌ಮೆಂಟ್ ಮೂಲಕ ತುಂಬಲು ಕ್ರಮ ವಹಿಸಲಾಗುತ್ತಿದೆ.

ಶ್ರೀರಂಗಪಟ್ಟಣ ತಾಲ್ಲೂಕಿನ ಮೀನುಗಾರರಿಗೆ ವಸತಿ ಸೌಕರ್ಯ ಒದಗಿಸುವುದು.

2932(3809)

ಶ್ರೀಮತಿ ಪಾರ್ವತಮ್ಮ ಶ್ರೀಕಂಠಯ್ಯ(ಶ್ರೀರಂಗಪಟ್ಟಣ): ಮಾನ್ಯ ಮೀನುಗಾರಿಕೆ, ಬಂದರು ಮತ್ತು ಪ್ರದೇಶಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶ್ರೀರಂಗಪಟ್ಟಣ ತಾಲ್ಲೂಕಿನಲ್ಲಿರುವ ಬೆಸ್ತ ಜನಾಂಗಕ್ಕೆ ವಸತಿ ಸೌಕರ್ಯದ ತೊಂದರೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಇದುವರೆವಿಗೆ ಬೆಸ್ತ ಜನಾಂಗದ ಎಷ್ಟು ಕುಟುಂಬಗಳಿಗೆ ವಸತಿ ಸೌಕರ್ಯವನ್ನು ಒದಗಿಸಲಾಗಿದೆ?

ಇ) ಇನ್ನು ಎಷ್ಟು ಕುಟುಂಬಗಳಿಗೆ ವಸತಿ ಸೌಕರ್ಯವನ್ನು ಒದಗಿಸಬೇಕಾಗಿದೆ. ಈ ಸಾಲಿನಲ್ಲಿ ವಸತಿ ಸೌಕರ್ಯ ನೀಡುವ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತಿದೆಯೇ?

ಶ್ರೀ ಬಿ.ರಮಾನಾಥ ರೈ (ಮೀನುಗಾರಿಕೆ, ಬಂದರು ಮತ್ತು ಪ್ರದೇಶಾಭಿವೃದ್ಧಿ ಸಚಿವರು):

ಅ) ಹೌದು.

ಆ) 215 ಮೀನುಗಾರಿಕಾ ಕುಟುಂಬಗಳು.

ಇ) ಇನ್ನೂ 172 ಕುಟುಂಬಗಳಿಗೆ ವಸತಿ ಸೌಕರ್ಯವನ್ನು ಒದಗಿಸಬೇಕಾಗಿದೆ. 2001-02ನೇ ಸಾಲಿನಲ್ಲಿ 20 ಮನೆಗಳನ್ನು ಒದಗಿಸಲು ಕ್ರಮಕೈಗೊಳ್ಳಲಾಗಿದೆ.

ಮಾವು, ಹಲಸು, ಬೇವು ಇತ್ಯಾದಿ ಮರಗಳು ಪ್ರತಿದಿನ ಬಿಡುಗಡೆ ಮಾಡುವ ಪ್ರಾಣ ವಾಯುವಿನ ಪ್ರಮಾಣ.

2933(3679)